**All India Radio: Bangalore**
**Regional Bulletin In Kannada**
**25.02.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**25.02.2026 / 2.30 p.m.**
**<><><><>**

ಮುಖ್ಯಾಂಶಗಳು

1. ಕಾರ್ಕಳದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಕಟ್ಟಡ ಉದ್ಘಾಟನಾ ಸಮಾರಂಭ - ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗಿ
2. ತುಮಕೂರು ಜಿಲ್ಲೆಯ ವಿವಿಧೆಡೆ ರೈಲ್ವೆ ಕಾಮಗಾರಿಗಳ ಪರಿಶೀಲನೆ ನಡೆಸಿದ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ
3. ಕಾಡಾನೆ ಹಾವಳಿ ; ಮಾರ್ಗಸೂಚಿ ಹೊರಡಿಸಿದ ಚಿಕ್ಕಮಗಳೂರು ಜಿಲ್ಲಾಡಳಿತ; ೧೨ ಗ್ರಾಮಾಗಳಲ್ಲಿ ನಿಷೇಧಾಜ್ಞೆ ಜಾರಿ
4. ರಣಜಿ ಟ್ರೋಫಿ ಫೈನಲ್ ; ೨ನೇ ದಿನದಾಟದಲ್ಲಿ ಕರ್ನಾಟಕ ವಿರುದ್ಧ ಮೊದಲ ಇನ್ನಿಂಗ್ಸ್ ಮುಂದುವರೆಸಿರುವ ಜಮ್ಮು-ಕಾಶ್ಮೀರ

<><><><>

ಉಡುಪಿ ಜಿಲ್ಲೆಯ ಕಾರ್ಕಳ ತಾಲೂಕಿನಲ್ಲಿ ಇಂದು ಹಮ್ಮಿಕೊಳ್ಳಲಾಗಿರುವ ವಿವಿಧ ಅಭಿವೃದ್ಧಿ ಕಾರ್ಯಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಂಡಿದ್ದಾರೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಕಾರ್ಕಳದ ಕುಕ್ಕಂದೂರಿನಲ್ಲಿ ಆಯೋಜಿಸಲಾಗಿರುವ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಡಾ.ಬಿ.ಆರ್.ಅಂಬೇಡ್ಕರ್ ಭವನ ಕಟ್ಟಡ, ಉದ್ಘಾಟಿಸಲಿದ್ದಾರೆ. ಈ ಭವನ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಚಟುವಟಿಕೆಗಳಿಗೆ ಪ್ರಮುಖ ಕೇಂದ್ರವಾಗಲಿದೆ. ಇದೇ ವೇಳೆ ಅವರು, ತಾಲೂಕು ಕಚೇರಿ ರಸ್ತೆಯಲ್ಲಿರುವ ಮಹಾತ್ಮಾಗಾಂಧಿ ವಸತಿ ಪ್ರೌಢಶಾಲಾ ಆವರಣದಲ್ಲಿ ನೂತನವಾಗಿ ನಿರ್ಮಿಸಲಾದ ಕಿಸಾನ್ ಸಭಾ ಸಭಾಂಗಣವನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಬಳಿಕ ಅವರು, ಕಿಸಾನ್ ಸಭಾ ಟ್ರಸ್ಟ್‌ನ ಮಹಾತ್ಮಾಗಾಂಧಿ ವಸತಿ ಪ್ರೌಢಶಾಲೆಯ ೩೫ನೇ ವರ್ಷದ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><><>

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಇಂದು ತುಮಕೂರು ಜಿಲ್ಲೆಯ ವಿವಿಧೆಡೆ ರೈಲ್ವೆ ಕಾಮಗಾರಿಗಳ ಪರಿಶೀಲನೆ ನಡೆಸಿದರು. ತಿಪಟೂರು ತಾಲ್ಲೂಕಿನ ಹೊನ್ನವಳ್ಳಿಯ

ಎಲ್‌ಸಿ-೮೮ರ ಬದಲಾಗಿ ನಿರ್ಮಿಸುತ್ತಿರುವ ರಸ್ತೆ ಮೇಲ್ಸೇತುವೆ ಕಾಮಗಾರಿಯ ಪರಿಶೀಲನೆ ನಡೆಸಲಾಯಿತು. ಬಾಡೇನಹಳ್ಳಿ ಗೇಟ್‌ನಲ್ಲಿ ರಸ್ತೆ ಕೆಳಸೇತುವೆಗಳ ಪರಿಶೀಲನೆ. ನಿಟ್ಟೂರು-ಮೈಸೂರು ಗೇಟ್ ಬಳಿ ನಿರ್ಮಿಸಿರುವ ಲೆವಲ್ ಗೇಟ್, ಮತ್ತು ರಸ್ತೆ ಕೆಳಸೇತುವೆಗಳ ಉದ್ಘಾಟನೆಯನ್ನು ಸಚಿವರು ನೆರವೇರಿಸಿದರು. ಈ ಸಂದರ್ಭದಲ್ಲಿ, ರೈಲ್ವೆ ಅಧಿಕಾರಿಗಳು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

<><><>

ಚಿಕ್ಕಮಗಳೂರು ಜಿಲ್ಲೆಯ ಮಲೆನಾಡು ಭಾಗದ ಹಲವೆಡೆ ಕಾಡಾನೆಗಳ ಸಂಚಾರ ಹೆಚ್ಚಾಗಿದ್ದು ಜನರ ಸುರಕ್ಷತೆ ದೃಷ್ಠಿಯಿಂದ ಜಿಲ್ಲಾಡಳಿತ ಕೆಲ ಮಾರ್ಗಸೂಚಿನಗಳನ್ನು ಹೊರಡಿಸಿದೆ. ಕಾಡಾನೆಗಳು ಹೆಚ್ಚಾಗಿ ಸಂಚರಿಸುತ್ತಿರುವ ಚಿಕ್ಕಮಗಳೂರು ತಾಲೂಕಿನ ಮೂಕ್ತಿಹಳ್ಳಿ, ವಸ್ತಾರೆ, ಮತ್ತಾವರ, ದಂಬದಳ್ಳಿ, ನಲ್ಲೂರು, ಕಾರೆಮನೆ, ಹುಕ್ಕುಂದ, ಜೋಳದಾಳ್, ಚಿಕೊಳ್ಳಲೆ, ತಳಿಹಳ್ಳ, ಶಿರಗುಂದ, ಗಡಬನಹಳ್ಳಿ ಎಂಬ  ೧೨ ಗ್ರಾಮಗಳಲ್ಲಿ ಸಂಜೆ ೪ ರಿಂದ ಬೆಳಗ್ಗೆ ೮ ಗಂಟೆವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಈ ಗ್ರಾಮಗಳ ಸುತ್ತ ಮುತ್ತಲ್ಲಿನ ಜನರು ಕಾರ್ಮಿಕರು ಎಚ್ಚರಿಕೆಯಿಂದ ಇರುವಂತೆ ಸಲಹೆ ನೀಡಲಾಗಿದೆ. ಮತ್ತೊಂದೆಡೆ ಅರಣ್ಯ ಸಚಿವ ಈಶ್ವರ್ ಬಿ. ಖಂಡ್ರೆ, ಚಿಕ್ಕಮಗಳೂರು ಅರಣ್ಯ ಅಧಿಕಾರಿಗಳೊಂದಿಗೆ ವರ್ಚುವಲ್ ಮೂಲಕ ಸಭೆ ನಡೆಸಿದ್ದು ಕಾಡಾನೆಗಳ ಹಾವಳಿ ತಪ್ಪಿಸಲು ಹಾಗು ಜನರ ಮೇಲೆ ದಾಳಿಗಳು ನಡೆಯದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ.

<><><>

ಸ್ವತ್ತು ಕಳುವು ಪ್ರಕರಣಗಳನ್ನು ಭೇದಿಸುವಲ್ಲಿ ನಗರ ಪೊಲೀಸರು ಯಶಸ್ವಿಯಾಗಿದ್ದಾರೆ ಎಂದು ಮೈಸೂರು ನಗರ ಪೊಲೀಸ್ ಆಯುಕ್ತ ಸೀಮಾ ಲಾಟ್ಕರ್ ತಿಳಿಸಿದ್ದಾರೆ. ಇಂದು ನಗರ ಪೊಲೀಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ನಗರ ವ್ಯಾಪ್ತಿಯ ಸರಸ್ವತಿಪುರಂ, ಕುವೆಂಪುನಗರ, ಲಷ್ಕರ್ ಮೊಹಲ್ಲಾ ವಿದ್ಯಾರಣ್ಯಪುರಂ, ವಿಜಯನಗರ, ಮೇಟಗಳ್ಳಿ, ಮಂಡಿ ಹಾಗೂ ನರಸಿಂಹರಾಜ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ನಡೆದ ಕಳುವು ಪ್ರಕರಣಗಳಲ್ಲಿ ೨ ಕೆಜಿ ೫೦ ಗ್ರಾಂ ಚಿನ್ನ, ೫ ಕೆಜಿ ೩೧೨ ಗ್ರಾಂ ಬೆಳ್ಳಿ ಪದಾರ್ಥಗಳು, ೫೭ ವಿವಿಧ ಬಗೆಯ ವಾಹನಗಳು ಸೇರಿದಂತೆ ಒಟ್ಟು ೨ ಕೋಟಿ ೯೬ ಲಕ್ಷಕ್ಕೂ ಹೆಚ್ಚು ಮೌಲ್ಯದ ಚಿನ್ನಾಭರಣ ಹಾಗೂ ೧೦ ಲಕ್ಷಕ್ಕೂ ಹೆಚ್ಚು ನಗದು ಸೇರಿದಂತೆ ಇತರೆ ಸ್ವತ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಎಲ್ಲಾ ಪ್ರಕರಣಗಳನ್ನು ಬೇಧಿಸುವಲ್ಲಿ ಮೈಸೂರು ನಗರ ಪೊಲೀಸ್ ಸಿಬ್ಬಂದಿ ಯಶಸ್ವಿಯಾಗಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಪ್ರಕರಣಗಳನ್ನು ಬೇಧಿಸಿದ ಪೊಲೀಸ್ ಸಿಬ್ಬಂದಿಗೆ ಪ್ರಶಂಸನಾಪತ್ರ ನೀಡಿ

ಅಭಿನಂದಿಸಲಾಗಿದೆ. ಈ ವೇಳೆ ನಗರ ಉಪ ಪೊಲೀಸ್ ಆಯುಕ್ತ ಸುಂದರ್ ರಾಜ್, ರವಿ ಪ್ರಸಾದ್ ಹಾಗೂ ಇತರೆ ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

<><><>

ಮುಳಬಾಗಿಲು ತಾಲೂಕಿನಲ್ಲಿ ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಸೂಕ್ತ ಕ್ರಮವಹಿಸಬೇಕು ಎಂದು ಶಾಸಕ ಸಮೃದ್ಧಿ ಮಂಜುನಾಥ್ ಸೂಚಿಸಿದ್ದಾರೆ. ಕುಡಿಯುವ ನೀರಿನ ಕಾರ್ಯಪಡೆ ಸಭೆಯಲ್ಲಿ ಮಾತನಾಡಿದ ಅವರು, ತಾಲೂಕಿನ ೨೦ ಪಂಚಾಯಿತಿಗಳ ೨೦೬ ಗ್ರಾಮಗಳಿಗೆ ೫೮೧ ಕೊಳವೆ ಬಾವಿ ಕೊರೆಸಿದ್ದು, ಇದರಲ್ಲಿ ೫೭೯ ಕೊಳವೆ ಬಾವಿಗಳು ಕಾರ್ಯನಿರ್ವಹಿಸುತ್ತಿವೆ. ೪೨ ಹಳ್ಳಿಗಳಲ್ಲಿ ನೀರಿನ ಕೊರತೆ ಎದುರಾಗಬಹುದು ಎಂದು ಊಹಿಸಲಾಗಿದೆ. ನಗರದ ೭೭ ವಾರ್ಡ್‌ಗಳಲ್ಲಿ ನೀರಿನ ಕೊರತೆ ಉಂಟಾದರೆ ಕೂಡಲೇ ಟ್ಯಾಂಕರ್ ಬಾಡಿಗೆಗೆ ಪಡೆದು ಸಮಸ್ಯೆಯನ್ನು ಬಗೆಹರಿಸಬೇಕು ಎಂದರು. ಮುಂದಿನ ಮೂರು ತಿಂಗಳು ಯಾವುದೇ ಸಮಸ್ಯೆ ಬಂದರೂ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸಬೇಕು. ತಾಲೂಕಿನಲ್ಲಿ ಪ್ರಸ್ತುತ ೪೯ ಸಾವಿರದ ೨೬೧ ಟನ್ ಮೇವು ಲಭ್ಯವಿದೆ. ಜನ ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವಿನ ಕೊರತೆಯಾಗಬಾರದು ಎಂದು ಸೂಚಿಸಿದರು.

<><><>

ಆಕಾಶವಾಣಿ ಕೇಂದ್ರಗಳಲ್ಲಿ ಕೃಷಿ ಕಾರ್ಯಕ್ರಮಗಳ ಕುರಿತ ಕಿಸಾನ್‌ವಾಣಿ ಪ್ರಾರಂಭವಾದ ದಿನವನ್ನು ರೇಡಿಯೋ ಕಿಸಾನ್ ದಿವಸ ಎಂದು ಆಚರಣೆ ಮಾಡಲಾಗುತ್ತಿದ್ದು, ನಾಳೆ ಹಾಸನ ಆಕಾಶವಾಣಿ ಕೇಂದ್ರ ರೇಡಿಯೋ ಕಿಸಾನ್ ದಿವಸವನ್ನು ಆಚರಿಸುತ್ತಿದೆ. ಇದರ ಅಂಗವಾಗಿ ಕೃಷಿಯಲ್ಲಿ ಕೃತಕ ಬುದ್ಧಿಮತ್ತೆಯ ಪರಿಣಾಮಕಾರಿ ಬಳಕೆ ಕುರಿತ ಒಂದು ದಿನದ ಕಾರ್ಯಗಾರ ಆಯೋಜನೆ ಮಾಡಲಾಗಿದೆ ಎಂದು ಹಾಸನ ಆಕಾಶವಾಣಿ ಕೇಂದ್ರದ ಕಾರ್ಯಕ್ರಮ ಮುಖ್ಯಸ್ಥರಾದ ಸುಜಾತ ಎಫ್. ತಳವಾರ್ ತಿಳಿಸಿದ್ದಾರೆ. ದೇಶದಲ್ಲಿ ಮೊಟ್ಟ ಮೊದಲ ಬಾರಿಗೆ ಕಿಸಾನ್‌ವಾಣಿ ಕಾರ್ಯಕ್ರಮವನ್ನು ಹಾಸನ ಅಕಾಶವಾಣಿ ಕೇಂದ್ರದ ಮೂಲಕ ಪ್ರಸಾರ ಮಾಡಲಾರಂಭಿಸಿದ ಹೆಗ್ಗಳಿಕೆ ಹಾಸನ ಆಕಾಶವಾಣಿ ಕೇಂದ್ರಕ್ಕೆ ಇದೆ. ಕಳೆದ ೧೧ ವರ್ಷಗಳಿಂದ ನಿರಂತರವಾಗಿ ಕಿಸಾನ್‌ವಾಣಿ ಕಾರ್ಯಕ್ರಮ ಕೇಂದ್ರದಿಂದ ಪ್ರಸಾರವಾಗುತ್ತಿದ್ದು ಕಾರ್ಯಗಾರವನ್ನು ಹಾಸನದ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಉದ್ಘಾಟಿಸಲಿದ್ದಾರೆ.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ನಗರಸಭೆಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರನ್ನು ಆಯ್ಕೆ ಮಾಡಲು ನಡೆದ ಚುನಾವಣೆಯಲ್ಲಿ ವಿಪ್ ಉಲ್ಲಂಘನೆ ಮಾಡಿದ್ದಕ್ಕಾಗಿ, ನೆಲಮಂಗಲ ನಗರಸಭೆಯ ಏಳು ಸದಸ್ಯರನ್ನು ಅನರ್ಹಗೊಳಿಸಿ ಜಿಲ್ಲಾಧಿಕಾರಿ ಎ.ಬಿ.ಬಸವರಾಜು

ಆದೇಶಿಸಿದ್ದಾರೆ. ಜೆಡಿಎಸ್ ನೀಡಿದ್ದ ವಿಪ್ ಉಲ್ಲಂಘನೆ ಮಾಡಿ ಪ್ರತಿಪಕ್ಷ ಕಾಂಗ್ರೆಸ್ ಅಭ್ಯರ್ಥಿಗೆ ಮತ ಚಲಾಯಿಸಿದ್ದನ್ನು ಪಕ್ಷವು ಮನ್ನಿಸದ ಕಾರಣ ಕರ್ನಾಟಕ ಸ್ಥಳೀಯ ಸಂಸ್ಥೆಗಳ ಪಕ್ಷಾಂತರ ನಿಷೇಧ ಅಧಿನಿಯಮದ ಅನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಏಳು ಸದಸ್ಯರನ್ನು ಅನರ್ಹಗೊಳಿಸಲಾಗಿದೆ. ಕಳೆದ ೨೦೨೫ರ ಫೆಬ್ರವರಿ ೧೩ರಂದು ನೆಲಮಂಗಲ ನಗರಸಭೆಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆಯಲ್ಲಿ ಪಕ್ಷದ ಆದೇಶವನ್ನು ಉಲ್ಲಂಘನೆ ಮಾಡಿ, ಮತ ಚಲಾಯಿಸಿದ್ದ ಹಿನ್ನಲೆಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷರು ದೂರು ಸಲ್ಲಿಸಿದ್ದರು. ವಿಚಾರಣೆ ನಡೆಸಿದ ಜಿಲ್ಲಾಧಿಕಾರಿ ಈ ಆದೇಶ ನೀಡಿದ್ದಾರೆ.

<><><><>

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕುವೆಂಪು ಭಾಷಾ ಭಾರತಿ ಪ್ರಾಧಿಕಾರ ವತಿಯಿಂದ ಬೆಂಗಳೂರಿನ ಕಲಾಗ್ರಾಮದಲ್ಲಿಂದು ಕುವೆಂಪು ವಿಚಾರ ಕ್ರಾಂತಿಯ ಸ್ವರೂಪ ವಿಷಯ ಕುರಿತು ತಿಂಗಳ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಂಡಿದೆ. ಖ್ಯಾತ ಸಂಸ್ಕೃತಿ ಚಿಂತಕರು ಹಾಗೂ ಸಾಹಿತಿಗಳಾದ ನಾಡೋಜ ಪ್ರೊಫೆಸರ್ ಬರಗೂರು ರಾಮಚಂದ್ರಪ್ಪ ಉಪನ್ಯಾಸ ನೀಡಲಿದ್ದಾರೆ. ಕುವೆಂಪು ಭಾಷಾ ಪ್ರಾಧಿಕಾರದ ಅಧ್ಯಕ್ಷ ಡಾ.ಚನ್ನಪ್ಪ ಕಟ್ಟಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮ ಇಂದು ಸಂಜೆ ೫ ಗಂಟೆಗೆ ನಡೆಯಲಿದೆ.

<><><><>

ಹಾವೇರಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ೫೨ ಬಾಲ್ಯ ವಿವಾಹಗಳನ್ನು ತಡೆಯಲಾಗಿದ್ದು, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆ ಹಾಗೂ ಬಾಲ್ಯ ವಿವಾಹಕ್ಕೆ ಸಂಬಂಧಪಟ್ಟಂತೆ ೩೫ ಪ್ರಕರಣ ಕಂಡುಬಂದಿದೆ ಎಂದು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ರೇವತಿ ಎಸ್. ಹೊಸಮಠ ತಿಳಿಸಿದ್ದಾರೆ. ಬಾಲ್ಯ ವಿವಾಹ ಹಾಗೂ ಪೋಕ್ಸೊ ಪ್ರಕರಣಗಳ ತಡೆ ಸೇರಿದಂತೆ ಮಕ್ಕಳ ರಕ್ಷಣೆ ಕಾಯ್ದೆಗಳ ಕುರಿತು ಗ್ರಾಮ ಪಂಚಾಯಿತಿ ಅಧಿಕಾರಿ, ಅಂಗನವಾಡಿ ಕಾರ್ಯಕರ್ತೆಯರು, ಶಾಲಾ ಶಿಕ್ಷಕರಿಗಾಗಿ ಆಯೋಜಿಸಲಾಗಿದ್ದ ವಿಶೇಷ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಮಕ್ಕಳ ರಕ್ಷಣೆಯಲ್ಲಿ ವಸತಿ ನಿಲಯಗಳ ಮೇಲ್ವಿಚಾರಕರ ಜವಾಬ್ದಾರಿ ಹೆಚ್ಚಿದೆ. ಜಿಲ್ಲೆಯಲ್ಲಿ ೨೦೨೫ರ ಏಪ್ರಿಲ್‌ನಿಂದ ೨೦೨೬ರ ಜನವರಿವರೆಗೆ ೪೦ ಬಾಲಗರ್ಭಿಣಿಯರು ಪತ್ತೆಯಾಗಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಮಂಗಳೂರಿನ ಪ್ರಮುಖ ಆಸ್ಪತ್ರೆಗಳಲ್ಲಿ ಒಂದಾದ ವೆನ್ಲಾಕ್ ಆಸ್ಪತ್ರೆಯ ಎಸ್ ಟಿಪಿ ಘಟಕ ಮೇಲ್ದರ್ಜೆಗೆರಿಸಲು ೨ ಕೋಟಿ ರೂಪಾಯಿ ಮೊತ್ತದ ಕಾಮಗಾರಿಗೆ ಅನುಮೋದನೆ ದೊರೆತಿದೆ. ವೆನ್ಲಾಕ್ ಆಸ್ಪತ್ರೆಯು ೬೦೫ ಹಾಸಿಗೆಯ ಸಾಮರ್ಥ್ಯ ಹೊಂದಿದ್ದು, ಒಟ್ಟು ೨೧ ಕಟ್ಟಡಗಳನ್ನು

ಹೊಂದಿದೆ. ಇಲ್ಲಿನ ಎಸ್‌ಟಿಪಿ ಘಟಕವು ೩೫೦ ಕೆಎಲ್‌ಡಿ ಸಾಮರ್ಥ್ಯ ಹೊಂದಿದ್ದು, ಕೊಳಚೆ ನೀರು ಸಂಸ್ಕರಣೆಯಲ್ಲಿ ಪರಿಣಾಮಕಾರಿ ವಿಧಾನವಾದ ಎನೆರೊಬಿಕ್ ಸ್ಲಡ್ಜ್ ಬ್ಲಾಂಕೆಟ್ ಅನ್ನು ಹೊಂದಿದೆ.

<><><><>

ಹುಬ್ಬಳ್ಳಿಯ ಕೆಎಸಿಎ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಕರ್ನಾಟಕ ಹಾಗೂ ಜಮ್ಮು-ಕಾಶ್ಮೀರ ನಡುವಿನ ರಣಜಿ ಟ್ರೋಫಿಯ ಫೈನಲ್ ಪಂದ್ಯದ ಎರಡನೇ ದಿನವಾದ ಇಂದು ತನ್ನ ಮೊದಲನೇ ಇನ್ನಿಂಗ್ಸ್ ಅನ್ನು ಮುಂದುವರೆಸಿರುವ ಜಮ್ಮು-ಕಾಶ್ಮೀರ ಇತ್ತೀಚಿನ ವರದಿ ಬಂದಾಗ ೬ ವಿಕೆಟ್ ನಷ್ಟಕ್ಕೆ ೪೭೩ ರನ್ ಗಳಿಸಿ ಆಡುತ್ತಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>